# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2171 (2589) |
| ಮಾನ್ಯ ಸದಸ್ಯರ ಹೆಸರು | ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 24/03/2022 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಖಾಸಗಿ ಚಾಲಕರ ನಿವೃತ್ತಿ ಜೀವನಕ್ಕೆ ಸರ್ಕಾರದಿಂದ ನೆರವು ನೀಡುವ ಯೋಜನೆಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ | ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು, ಖಾಸಗಿ ಚಾಲಕರ ನಿವೃತ್ತಿ ಜೀವನಕ್ಕೆ ನೆರವು ನೀಡುವ ಯಾವುದೇ ಪ್ರತ್ಯೇಕ ಯೋಜನೆಯನ್ನು ಜಾರಿಗೊಳಿಸುತ್ತಿಲ್ಲ.<br><br>ಆದರೆ, ಎಲ್ಲಾ ಅಸಂಘಟಿತ ವರ್ಗಗಳ ಕಾರ್ಮಿಕರಿಗೆ ವೃದ್ಧಾಪ್ಯದಲ್ಲಿ ಸಾಮಾಜಿಕ ಹಾಗೂ ಆರ್ಥಿಕ ಭದ್ರತೆ ಒದಗಿಸುವ ಉದ್ದೇಶದಿಂದ ಕೇಂದ್ರ ಸರ್ಕಾರವು ವಂತಿಕೆ ಆಧಾರಿತ ಪಿಂಚಣಿ ಯೋಜನೆಯಾದ "ಪ್ರಧಾನ ಮಂತ್ರಿ ಶ್ರಮ ಯೋಗಿ ಮಾನ್‌ಧನ್ ಯೋಜನೆ"ಯನ್ನು ಜಾರಿಗೆ ತಂದಿದ್ದು, ಈ ಯೋಜನೆಯಡಿ 18-40 ವಯೋಮಾನದ ಕಾರ್ಮಿಕರು ನೋಂದಾಯಿಸಿಕೊಂಡು, 60 ವರ್ಷ ಪೂರೈಸಿದ ನಂತರ ಮಾಸಿಕ ನಿಶ್ಚಿತ ರೂ. 3,000/-ಗಳ ಪಿಂಚಣಿಯನ್ನು ಪಡೆಯಬಹುದಾಗಿದೆ. ಈ ಯೋಜನೆಯಡಿ ನೋಂದಾಯಿತ ಕಾರ್ಮಿಕರಿಗೆ ವಯಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ಮಾಸಿಕ ರೂ. 55/- ರಿಂದ 200/- ರವರೆಗೆ ಸಮಾನಾಂತರ ವಂತಿಕೆಯನ್ನು ಪಾವತಿಸುತ್ತದೆ. ಖಾಸಗಿ ವಾಹನ ಚಾಲಕರು ಅಸಂಘಟಿತ ಕಾರ್ಮಿಕರ ವ್ಯಾಪ್ತಿಯಲ್ಲಿ ಬರುತ್ತಿದ್ದು ಯೋಜನೆಯಡಿ ನೋಂದಾಯಿಸಿಕೊಂಡು ಮಾಸಿಕ ಪಿಂಚಣಿಯ ಸೌಲಭ್ಯವನ್ನು ಪಡೆಯಬಹುದಾಗಿದೆ. |
| ಆ) | ಕೋವಿಡ್ ನಿಂದ ಸಂತ್ರಸ್ಥರಾದ ಆಟೋ ಮತ್ತು ಟ್ಯಾಕ್ಸಿ ಚಾಲಕರಿಗೆ ಜಾತಿವಾರು ಇರುವ ನಿಗಮ, ಮಂಡಳಿಗಳಿಂದ ಕನಿಷ್ಠ ಒಂದು ಲಕ್ಷದಿಂದ ಎರಡು ಲಕ್ಷದವರೆಗೂ ಸಾಲ ಸೌಲಭ್ಯ ನೀಡುವ ಉದ್ದೇಶ ಸರ್ಕಾರ ಹೊಂದಿದೆಯೇ | - ಇಲ್ಲ. - |

| | | |
|---|---|---|
| ಇ) | ಸರ್ಕಾರವು ಆಟೋ, ಟ್ಯಾಕ್ಸಿ, ಖಾಸಗಿ ಬಸ್ ಹಾಗೂ ಲಾರಿ ಚಾಲಕರ ಶ್ರೇಯೋಭಿವೃದ್ಧಿಗೆ ಚಾಲಕರ ಅಭಿವೃದ್ಧಿ ನಿಗಮ ಸ್ಥಾಪಿಸುವ ಉದ್ದೇಶ ಹೊಂದಿದೆಯೇ | ಆಟೋ, ಟ್ಯಾಕ್ಸಿ, ಖಾಸಗಿ ಬಸ್ ಹಾಗೂ ಲಾರಿ ಚಾಲಕರ ಶ್ರೇಯೋಭಿವೃದ್ಧಿಗೆ ಚಾಲಕರ ಅಭಿವೃದ್ಧಿ ನಿಗಮ ಸ್ಥಾಪಿಸುವ ಪ್ರಸ್ತಾವನೆಯು ಪ್ರಸ್ತುತ ಸರ್ಕಾರದ ಮುಂದಿರುವುದಿಲ್ಲ. |

**ಕಾಇ 209 ಎಲ್‌ಇಟಿ 2022**

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು